I/451014/2023

**ಕರ್ನಾಟಕ ಸರ್ಕಾರ**

**ನಿರ್ದೇಶಕರ ಕಛೇರಿ,ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560012**

**ಇ-ಮೇಲ್:commissioner.pue@gmail.com ಸ್ಥಿರ ದೂರವಾಣಿ ಸಂ:080-23562033**

ಸಂಖ್ಯೆ: E- 1123971 DPUE-EST10OTH/24/2023-PLCY

ದಿನಾಂಕ: 07-07-2023

**ಜ್ಞಾಪನ**

ವಿಷಯ: 2023-24 ನೇ ಸಾಲಿನ ಪ್ರಾಂಶುಪಾಲರ / ಉಪನ್ಯಾಸಕರ ಸಾರ್ವತ್ರಿಕ ವರ್ಗಾವಣೆಗೆ ಅಂತಿಮ ಅರ್ಹತಾದಾಯಕ ಅಂಕಗಳನ್ನು (Weighted Score) ಪ್ರಕಟಿಸುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 12 ಶಾಸನ 2020, ದಿನಾಂಕ:27-03-2020.
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 47 ಶಾಸನ 2021, ದಿನಾಂಕ: 18-01-2022.
3. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಪಿ 32 ಟಿಪಿಯು 2021, ದಿನಾಂಕ: 12-05-2022.
4. ಈ ಕಚೇರಿಯ ಜ್ಞಾಪನ ಸಂಖ್ಯೆ: E-1096150 DPUE-EST10OTRS/148/ 2023-PLCY, ದಿನಾಂಕ:02.06.2023.
5. ಸರ್ಕಾರದ ಪತ್ರ ಸಂಖ್ಯೆ: ಇಡಿ 84 ಎಸ್ ಹೆಚ್ ಹೆಚ್ 2023 ದಿನಾಂಕ: 26/06/2023.
6. ಈ ಕಚೇರಿಯ ಜ್ಞಾಪನ ಸಂಖ್ಯೆ: E-1096150 DPUE-EST10OTRS/148/ 2023-PLCY, ದಿನಾಂಕ:22.06.2023.

* * *

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ 2020 ರನ್ವಯ ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು (ಪ್ರಾಂಶುಪಾಲರು / ಉಪನ್ಯಾಸಕರ ವರ್ಗಾವಣೆ ನಿಯಂತ್ರಣ) ನಿಯಮಗಳು 2022 ರ ನಿಯಮ 4 (ಹೆಚ್) ರಲ್ಲಿ ಉಲ್ಲೇಖಿಸಿರುವಂತೆ ವರ್ಗಾವಣೆ ವೇಳಾಪಟ್ಟಿ ಪ್ರಕಟಿಸುವ ಮೊದಲು ಪ್ರಾಂಶುಪಾಲರ / ಉಪನ್ಯಾಸಕರ ಅರ್ಹತಾದಾಯಕ ಅಂಕಗಳನ್ನು (Weighted Score) ಪ್ರಕಟಿಸುವ ಕುರಿತಾಗಿ ವೇತನ ಸೆಳೆದು ವಿತರಣೆ ಮಾಡುವ ಅಧಿಕಾರಿಯು (DDO) Departmental Online Portal ನ ಲಾಗಿನ್ ಮೂಲಕ ಪ್ರಾಂಶುಪಾಲರ / ಉಪನ್ಯಾಸಕರ ಸೇವಾ ವಿವರಗಳನ್ನು (Update) ನವೀಕರಿಸಲು ದಿನಾಂಕ: 05/06/2023 ವರೆಗೆ ಉಲ್ಲೇಖ-4ರಲ್ಲಿ ಅವಕಾಶ ಕಲ್ಪಿಸಲಾಗಿತ್ತು.

ಉಲ್ಲೇಖ-06 ರಲ್ಲಿ, ವೇತನ ಸೆಳೆದು ವಿತರಣೆ ಮಾಡುವ ಅಧಿಕಾರಿಯು (DDO) Departmental Online Portal ನ ಲಾಗಿನ್‌ನಲ್ಲಿ ನವೀಕರಿಸಲ್ಪಟ್ಟ ಸೇವಾ ವಿವರಗಳನ್ವಯ ಪ್ರಾಂಶುಪಾಲರ/ ಉಪನ್ಯಾಸಕರ ಅರ್ಹತಾದಾಯಕ ಅಂಕಗಳ (Weighted Score) ತಾತ್ಕಾಲಿಕ ಪಟ್ಟಿಯನ್ನು ದಿನಾಂಕ: 22/06/2023 ರಂದು ಇಲಾಖಾ ಜಾಲತಾಣದಲ್ಲಿ ಪ್ರಕಟಿಸಲಾಗಿತ್ತು. ಸದರಿ ಅರ್ಹತಾದಾಯಕ ಅಂಕಪಟ್ಟಿಗೆ ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ, ಪೂರಕ ದಾಖಲೆಗಳನ್ನು ಪ್ರಾಂಶುಪಾಲರ ದೃಢೀಕರಣದೊಂದಿಗೆ ದಿನಾಂಕ: 27/06/2023 ರೊಳಗಾಗಿ ಜಂಟಿ ನಿರ್ದೇಶಕರು (ಆಡಳಿತ), ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು, ಇವರಿಗೆ ಇ-ಮೇಲ್ ವಿಳಾಸ: dpuetransfer22@gmail.com, ಮೂಲಕ ಸಲ್ಲಿಸಲು ಸೂಚಿಸಿ, ಅವಕಾಶ ಕಲ್ಪಿಸಲಾಗಿತ್ತು.

ಅದರಂತೆ, ಉಲ್ಲೇಖ- 6 ರನ್ವಯ ಸ್ವೀಕೃತವಾದ ಆಕ್ಷೇಪಣೆಗಳನ್ನು ಪರಿಶೀಲಿಸಿ, ನಿಯಮಾನುಸಾರ ಅರ್ಹ ಆಕ್ಷೇಪಣೆಗಳನ್ನು ಪರಿಗಣಿಸಿ, ವೇತನ ಸೆಳೆದು ವಿತರಣೆ ಮಾಡುವ ಅಧಿಕಾರಿಯು (DDO) Departmental Online Portal ನ ಲಾಗಿನ್ ಮೂಲಕ ಪ್ರಾಂಶುಪಾಲರ / ಉಪನ್ಯಾಸಕರ ಅರ್ಹತಾದಾಯಕ ಅಂಕಗಳನ್ನು (Weighted Score) ಪರಿಷ್ಕರಿಸಿ, ಪ್ರಾಂಶುಪಾಲರಿಂದ ನವೀಕರಿಸಲ್ಪಟ್ಟ ಸೇವಾ ವಿವರಗಳನ್ವಯ **ಅಂತಿಮ ಅರ್ಹತಾದಾಯಕ ಅಂಕಗಳ (Weighted Score) ಪಟ್ಟಿಯನ್ನು ಈ ಪತ್ರದೊಂದಿಗೆ ಲಗತ್ತಿಸಿರುವ ಅನುಬಂಧದಲ್ಲಿ ಪ್ರಕಟಿಸಲಾಗಿದೆ.**

***ವಿಶೇಷ ಸೂಚನೆ:***

1. ಉಲ್ಲೇಖ-3ರ 2022ರ ಅಧಿಸೂಚನೆಯ ನಿಯಮ 4 (ಡಿ) ರಲ್ಲಿ ಉಲ್ಲೇಖಿಸಿರುವಂತೆ, ಒಂದು ವೇಳೆ ಪ್ರಾಂಶುಪಾಲರ / ಉಪನ್ಯಾಸಕರ ಅರ್ಹತಾದಾಯಕ ಅಂಕಗಳು ಸಮನಾಗಿದ್ದಲ್ಲಿ, ಅವರ ಸೇವೆಗೆ ಸೇರಿದ ದಿನಾಂಕದ ಅಧಾರದ ಮೇಲೆ ಜೇಷ್ಠತೆಯನ್ನು ಪರಿಗಣಿಸಲಾಗುವುದು. ಸೇವೆಗೆ ಸೇರಿದ ದಿನಾಂಕವು ಒಂದೇ ಇದ್ದಲ್ಲಿ ಅವರ ಜನ್ಮದಿನಾಂಕದ ಅಧಾರದ ಮೇಲೆ ಜೇಷ್ಠತೆಯನ್ನು ಪರಿಗಣಿಸಲಾಗುವುದು.
2. ಉಲ್ಲೇಖ-3ರ 2022ರ ಅಧಿಸೂಚನೆಯ ನಿಯಮ 4 (ಜಿ) ರಲ್ಲಿ ಉಲ್ಲೇಖಿಸಿರುವಂತೆ, ಈ ಜ್ಞಾಪನದಲ್ಲಿ ಪ್ರಕಟಿಸಲಾದ ಪ್ರಾಂಶುಪಾಲರ / ಉಪನ್ಯಾಸಕರ ಅಂತಿಮ ಅರ್ಹತಾದಾಯಕ ಅಂಕ (Weighted Score)ಗಳನ್ನು ವರ್ಗಾವಣೆ ಪ್ರಕ್ರಿಯೆಯು ಪೂರ್ಣಗೊಳ್ಳುವವರೆಗೆ ಯಾವುದೇ ಬದಲಾವಣೆಯನ್ನು ಮಾಡಲಾಗುವುದಿಲ್ಲ.

**Signed by Raju N**
**Date: 07-07-2023 21:32:22**

ಜಂಟಿ ನಿರ್ದೇಶಕರು(ಆಡಳಿತ),
ಪದವಿ ಪೂರ್ವ ಶಿಕ್ಷಣ ಇಲಾಖೆ.

**ಇವರಿಗೆ:**

1. ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪ ನಿರ್ದೇಶಕರುಗಳಿಗೆ - ಅಗತ್ಯ ಕ್ರಮಕ್ಕಾಗಿ.
2. ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ - ಜಿಲ್ಲಾ ಉಪ ನಿರ್ದೇಶಕರ ಮೂಲಕ ಅಗತ್ಯ ಕ್ರಮಕ್ಕಾಗಿ.
3. ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರಿಗೆ – ಪ್ರಾಂಶುಪಾಲರ ಮೂಲಕ ಅಗತ್ಯ ಕ್ರಮಕ್ಕಾಗಿ.

**ಪ್ರತಿ:**

1. ನಿರ್ದೇಶಕರು/ಜಂಟಿ ನಿರ್ದೇಶಕರು(ಆಡಳಿತ)/(ಮಾನ್ಯತೆ ಮತ್ತು ಅನುದಾನ)/(ಶೈಕ್ಷಣಿಕ) ಇವರ ಆಪ್ತ ಶಾಖೆಗೆ.
2. ಸಹಾಯಕ ನಿರ್ದೇಶಕರು – ಇ-ಆಡಳಿತ ನಿರ್ದೇಶಕರ ಕಚೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ- ಇಲಾಖಾ ಜಾಲತಾಣದಲ್ಲಿ ಅಳವಡಿಸಲು.
3. ಕಚೇರಿ ಪ್ರತಿ.